ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/18/ನೇ.ವಿ/2026 (ಆರ್.ಪಿ.ಸಿ) ದಿನಾಂಕ: 16.10.2026

ಪ್ರಕಟಣೆ

ಉಳಿಕೆ ಮೂಲ ವೃಂದದ ಭೂಮಾಪಕರು ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯ ತಾತ್ಕಾಲಿಕ ಅಂಕಪಟ್ಟಿ & ಅಂತಿಮ ಅಂಕ ಪಟ್ಟಿ ಪ್ರಕಟಿಸಿರುವ ಬಗ್ಗೆ.

*****

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಭೂಮಾಪಕರು ಹುದ್ದೆಗಳಿಗೆ ನೇಮಕಾತಿ ಸಂಬಂಧ ದಿನಾಂಕ 02.10.2026 ರಂದು ನಡೆದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್ ಸೈಟ್ ನಲ್ಲಿ ದಿನಾಂಕ 03-10-2026 ರಂದು ಪ್ರಕಟಿಸಲಾಗಿದ್ದು, ಸದರಿ ಕೀ ಉತ್ತರಗಳಿಗೆ ಆಕ್ಷೇಪಣೆಗಳನ್ನು ಸಲ್ಲಿಸಲು ದಿನಾಂಕ 05.10.2026 ರವರೆಗೆ ಅವಕಾಶ ನೀಡಲಾಗಿತ್ತು.

ಪ್ರಕಟಿತ ಕೀ ಉತ್ತರಗಳಿಗೆ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿ ಮೂಲಕ ಪರಿಶೀಲಿಸಿ ಪರಿಷ್ಕೃತ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ 09-10-2026 ರಂದು ಪ್ರಕಟಿಸಲಾಗಿತ್ತು ಹಾಗೂ ಪರಿಷ್ಕೃತ ಕೀ ಉತ್ತರಗಳನ್ವಯ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ತಾತ್ಕಾಲಿಕ ಫಲಿತಾಂಶವನ್ನು ದಿನಾಂಕ 09.10.2026 ರಂದು ಪ್ರಕಟಿಸಿ ದಿನಾಂಕ 11.10.2026 ಬೆಳಿಗ್ಗೆ 11.00 ರೊಳಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿತ್ತು.

ತಾತ್ಕಾಲಿಕ ಫಲಿತಾಂಶಕ್ಕೆ ಸ್ವೀಕೃತವಾದ ಆಕ್ಷೇಪಣೆಗಳನ್ನು ಪರಿಶೀಲಿಸಿ, ಭೂಮಾಪಕರು ಹುದ್ದೆಗಳಿಗೆ ತಾತ್ಕಾಲಿಕ ಅಂಕಪಟ್ಟಿಯನ್ನು ದಿನಾಂಕ 16.10.2026 ರಂದು ಪ್ರಕಟಿಸಲಾಗಿದೆ. ಅಧಿಸೂಚನೆಯಲ್ಲಿ ತಿಳಿಸಿರುವಂತೆ ಕನಿಷ್ಠ 35% ಹಾಗೂ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಿ ಅಂತಿಮ ಅಂಕಪಟ್ಟಿಯನ್ನು ದಿನಾಂಕ 17.10.2026 ರಂದು ಪ್ರಕಟಿಸಿ ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆಗೆ ಸದರಿ ಅಂತಿಮ ಅಂಕಪಟ್ಟಿಯನ್ನು ಹಸ್ತಾಂತರಿಸಲಾಗುವುದು ಹಾಗೂ ನೇಮಕಾತಿ ಪ್ರಾಧಿಕಾರದಿಂದ ನಿಯಮಾನುಸಾರ ಆಯ್ಕೆ ಪಟ್ಟಿ ಪ್ರಕಟಿಸಲು ಕ್ರಮವಹಿಸುವರು.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in